# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 20-03-2021 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
4. ಶ್ರೀ. ಮಂಜುನಾಥ, ಹಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಯಲಹಂಕ ವಾರ್ಡ್ 1ರ ವ್ಯಾಪ್ತಿಯಲ್ಲಿರುವ ಅಯ್ಯಪ್ಪಸ್ವಾಮಿ ದೇವಸ್ಥಾನದ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ನಿರ್ವಹಿಸಿದ ಕಾಮಗಾರಿಯ ಮಣ್ಣನ್ನು ತೆಗೆದುಹಾಕುವಂತೆ ಸ್ಥಳೀಯರು ಸಭೆಯಲ್ಲಿ ಕೋರಿದರು. | ಬಿ.ಡಬ್ಲ್ಯೂಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ) |
| 02 | ಮಾರುತಿನಗರ 4ನೇ ಕ್ರಾಸ್ ಹಾಗೂ ಮಾರುತಿನಗರದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕಾವೇರಿ ನೀರನ್ನು ಸ್ಥಗೀತಗೊಳಿಸಿರುವುದರಿಂದ ಸ್ಥಳಿಯ ಸಾರ್ವಜನಿಕರು ಸಭೆಯಲ್ಲಿ ಅಕ್ರೋಶ ವ್ಯಕ್ತಪಡಿಸಿದರು. ಹಾಗೂ ಸಂಬಂದಿಸಿದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಸಮರ್ಪಕವಾಗಿ ಕೆಲಸ ನಿರ್ವಹಿಸದೇ ಇರುವ ಬಗ್ಗೆ ಹಾಗೂ ವಾರ್ಡ್ ಕಮಿಟಿ ಮಿಟಿಂಗ್‌ಗಳಿಗೆ ಬಿ.ಡಬ್ಲ್ಯೂ.ಎಸ್.ಎಸ್. ಬಿ ಅಧಿಕಾರಿಗಳು ಗೈರು ಹಾಜರಾಗುತ್ತಿರುವ ಬಗ್ಗೆ ಸ್ಥಳೀಯ ಮುಖಂಡರುಗಳಾದ ಶ್ರೀ.ಹೇಮರಾಜ್, ಅ.ಬ.ಶಿವಕುಮಾರ್, ಶ್ರೀ.ಮುನಿರಾಜು ಶ್ರೀ.ಮೋಹನ್ ಹಾಗೂ ಇತರರು ಅಕ್ಷೇಪಣೆ ವ್ಯಕ್ತಪಡಿಸಿದರು. | ಬಿ.ಡಬ್ಲ್ಯೂಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ) |

P.T.O

| | | | |
|---|---|---|---|
| 03 | ವಿ.ಡಿಬಿ ಸೇಲ್‌ಡಾನ್ ಹತ್ತಿರ ಯು.ಜಿ.ಡಿ ನೀರನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ರಾಜಕಾಲುವೆಗೆ ಹರಿದು ಬಿಟ್ಟಿರುವುದಾಗಿ ಹಾಗೂ ಹಾಲಿ ಸುರಬಿ ಬಡಾವಣೆ ಒಳಗಡೆ ಹರಿದು ಬರುತ್ತಿದ್ದು, ದುರ್ವಾಸನೆಯಿಂದ ಕೂಡಿರುವುದಾಗಿ ತಿಳಿಸಿ ಕೂಡಲೇ ಸರಿಪಡಿಸಿಕೊಡಬೇಕೆಂದು ಸ್ಥಳೀಯರು ಸಭೆಯಲ್ಲಿ ಕೋರಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 04 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಒಳಚರಂಡಿ ಸಂಪರ್ಕ ಮತ್ತು ಕಾವೇರಿ ನೀರು ಸಂಪರ್ಕವನ್ನು ಸಾರ್ವಜನಿಕರು ಪಡೆಯಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಮನೆ ಮನೆಗೆ ತೆರಳಿ ಸಂಪರ್ಕ ಪಡೆಯುವ ಬಗ್ಗೆ ನೋಟಿಸ್ ಜಾರಿ ಮಾಡಿ ಶುಲ್ಕದ ಬಗ್ಗೆ ವಿವರಗಳನ್ನು ನೀಡುವಂತೆ ಸಭೆಯಲ್ಲಿ ಸ್ಥಳೀಯರು ಅಕ್ರೋಶ ವ್ಯಕ್ತಪಡಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 05 | ಮಾರುತಿನಗರ 1ನೇ ಮುಖ್ಯರಸ್ತೆಯಲ್ಲಿ ರಸ್ತೆಗೆ ಅಡ್ಡಲಾಗಿ ಇರುವ ಗಸಗಸೆ ಮರವನ್ನು ತೆರವುಗೊಳಿಸುವಂತೆ ಸ್ಥಳೀಯರು ಸಭೆಯಲ್ಲಿ ಕೋರಿದರು. | ಅರಣ್ಯ ಇಲಾಖೆಯವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ವಲಯ ಅರಣ್ಯಾಧಿಕಾರಿಗಳು (ಯಲಹಂಕ) |
| 06 | ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಸುಮಾರು 15 ದಿನಕ್ಕೊಮ್ಮೆ ನೀರು ಬಿಡುತ್ತಿದ್ದು, ವಾಟರ್‌ಮೆನ್‌ಗಳು ಹಾಗೂ ಲೈನ್‌ಮೆನ್‌ಗಳು ಸ್ಥಳಿಯರ ಹತ್ತಿರ ಹಣ ಕೇಳಿತ್ತಿರುವುದಾಗಿ ಅಕ್ಷೇಪಿಸಿ ವಾಟರ್‌ಮೆನ್‌ಗಳನ್ನು ವಾರ್ಡ್‌ನಿಂದ ಬೇರೆ ವಾರ್ಡ್‌ಗೆ ವರ್ಗಾವಣೆಗೊಳಿಸಬೇಕೆಂದು ಸಭೆಯಲ್ಲಿ ಕೋರಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 07 | ಮುಂದಿನ ಸಭೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್ ಬಿ ಇಲಾಖೆಯವರು ಮಾರುತಿನಗರ ಹಾಗೂ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಇದುವರೆವಿಗೂ ಸಾರ್ವಜನಿಕರಿಗೆ ಕಾವೇರಿ ನೀರು ಸಂಪರ್ಕ ಮತ್ತು ಯು.ಜಿ.ಡಿ ಸಂಪರ್ಕವನ್ನು ನೀಡಿರುವ ವಿವರಗಳನ್ನು ಸಲ್ಲಿಸುವಂತೆ ಸಭೆಯಲ್ಲಿ ಸ್ಥಳೀಯ ನಿವಾಸಿಗಳು ಕೋರಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಮುಂದಿನ ಸಭೆಗೆ ಬಿ.ಡಬ್ಲ್ಯೂ.ಎಸ್.ಎಸ್ ಬಿ ಇಲಾಖೆಯಿಂದ ಸಂಪರ್ಕ ಪಡೆದುಕೊಂಡಿರುವವರ ಪಟ್ಟಿಯನ್ನು ಸಭೆಗೆ ನೀಡಲು ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 08 | ಯಲಹಂಕ ಸರ್ಕಾರಿ ಆಸ್ಪತ್ರೆ ರಸ್ತೆಯಲ್ಲಿ ಸುಮಾರು 3 ರಿಂದ 4 ಗಾರ್ಬೇಜ್ ಪಾಯಿಂಟ್‌ಗಳಿದ್ದು, ಯಲಹಂಕ ರೈಲ್ವೆ ಸ್ಟೇಷನ್‌ನಿಂದ ಬರುವ ಪ್ರಯಾಣಿಕರಿಗೆ ತೊಂದರೆ ಉಂಟಾಗುತ್ತಿದ್ದು, ಈ ಗಾರ್ಬೇಜ್ ಪಾಯಿಂಟ್‌ಗಳನ್ನು ಬೇರೆ ಕಡೆಗೆ ಸ್ಥಳಾಂತರ ಗೊಳಿಸಬೇಕೆಂದು ಸ್ಥಳೀಯರು ಸಭೆಗೆ ಕೋರಿದರು. | ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ವಿವೇಕ್ ರವರಿಗೆ ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ. ಮಂಜುನಾಥ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು (ಆರೋಗ್ಯ ಶಾಖೆ ಯಲಹಂಕ) |
| 09 | ಯಲಹಂಕ ಡೌನ್ ಬಜಾರ್ ರಸ್ತೆಯಲ್ಲಿ ಯು.ಜಿ.ಡಿ ನೀರನ್ನು ತೆರದ ಚರಂಡಿಗೆ ಬಿಡುತ್ತಿರುವುದಾಗಿ ಶ್ರೀ.ಹೇಮರಾಜ್ ರವರು ಸಭೆಗೆ ದೂರನ್ನು ನೀಡಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ಶಶಿಕುಮಾರ್ ರವರಿಗೆ ಸ್ಥಳದಲ್ಲಿ ಪರೀಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |

P.T.O

-3-

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೊಡೆಲ್ ಅಧಿಕಾರಿಗಳು<br>ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.